# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 742+1090 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ಮತ್ತು ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾಗದ ದಿನಾಂಕ | 11.12.2023 |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

******

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಸ್ವಾಯತ್ತ ಸರ್ಕಾರಿ ವೈದ್ಯಕೀಯ ವಿಜ್ಞಾನ ಕಾಲೇಜುಗಳ ಬೋಧಕ / ಬೋಧಕೇತರ ಸಿಬ್ಬಂದಿಗಳ ನೇಮಕಾತಿ, ಜೇಷ್ಠತೆ, ಕಾಲಮಿತಿ ಪದೋನ್ನತಿ ಹಾಗೂ ಬಡ್ತಿ ಸಂಬಂಧ ಎನ್.ಎಂ.ಸಿ ನಿಯಮಗಳಿಗೆ ಪೂರಕವಾಗಿ ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಸದರಿ ಸ್ವಾಯತ್ತ ಸಂಸ್ಥೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದಿರುವುದರಿಂದ ತಮ್ಮ ಅನುಕೂಲಕ್ಕನುಗುಣವಾಗಿ ನೇಮಕಾತಿ, ಬಡ್ತಿ, ಜೇಷ್ಠತಾ ಪಟ್ಟಿ, ಕಾಲಮಿತಿ ಬಡ್ತಿಗಳನ್ನು ಒಂದೊಂದು ಸಂಸ್ಥೆಯಲ್ಲಿ ಒಂದೊಂದು ರೀತಿಯಾಗಿ ನೀಡುತ್ತಿರುವುದರಿಂದ ವೈದ್ಯಕೀಯ ಕಾಲೇಜುಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಎನ್.ಎಂ.ಸಿ ನಿಯಮಗಳನ್ವಯ ಕ್ರಮವಹಿಸುತ್ತಿರುವುದರಿಂದ ವೈದ್ಯಕೀಯ ಕಾಲೇಜುಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿ ಉಂಟಾಗಿರುವುದಿಲ್ಲ. |
| ಇ) | ದೀರ್ಘ ಕಾಲದಿಂದ ಎಲ್ಲಾ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಿಗೆ ಸಂಬಂಧಪಟ್ಟಂತೆ ಎನ್.ಎಂ.ಸಿ ನಿಯಮಗಳಿಗೆ ಅನುಗುಣವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚನೆ ಮಾಡದಿರಲು ಕಾರಣಗಳೇನು; (ವಿವರಗಳೊಂದಿಗೆ ಮಾಹಿತಿ ನೀಡುವುದು) | ಸ್ವಾಯತ್ತ ಸಂಸ್ಥೆಗಳಲ್ಲಿನ ಬೈಲಾ, ಎಂ.ಓ.ಎ ಮತ್ತು ಸಿ & ಆರ್ ನಿಯಮಾವಳಿಗಳು ಏಕರೂಪವಿಲ್ಲದಿರುವುದನ್ನು ಸರ್ಕಾರವು ಗಮನಿಸಿ, ಎಲ್ಲಾ ಸ್ವಾಯತ್ತ ಸಂಸ್ಥೆಗಳಿಗೆ ಅನ್ವಯವಾಗುವಂತೆ ಪ್ರಾಥಮಿಕವಾಗಿ ನಿರ್ದೇಶಕರು, ಡಿಎಂಇರವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಿ, ಸಮಿತಿಯು ಸಲ್ಲಿಸಿರುವ ವರದಿ ಆಧಾರದ ಮೇರೆಗೆ ಬೋಧಕ ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮಾವಳಿಗಳು, ಬೈಲಾ ಮತ್ತು ಎಂ.ಓ.ಎಗಳನ್ನು ಪರಿಷ್ಕರಿಸಿ, ಆಡಳಿತ ಮಂಡಳಿಯ ಅನುಮೋದನೆ ನೀಡಲಾಗಿದೆ. |
| ಈ) | ಇದರಿಂದಾಗಿ ನ್ಯಾಯಾಲಯದಲ್ಲಿ ವ್ಯಾಜ್ಯಗಳು ಹೆಚ್ಚಾಗಿ, ಆಡಳಿತ ನಿರ್ವಹಣೆಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಪರಿಷ್ಕರಿಸಲಾದ ನಿಯಮಾವಳಿಗಳಿಗೆ ಆರ್ಥಿಕ ಇಲಾಖೆ ಮತ್ತು ಕಾನೂನು ಇಲಾಖೆಯ ಸಹಮತ ಕೋರಲಾಗಿದೆ. ಸದರಿ ಇಲಾಖೆಗಳಿಂದ ಸಹಮತ ದೊರೆತ ಕೂಡಲೇ ಆಡಳಿತ ಮಂಡಳಿ ಅನುಮೋದನೆಯನ್ವಯ ಸದರಿ ಬೈಲಾ, ಎಂ.ಓ.ಎ ಮತ್ತು ಸಿ & ಆರ್ ನಿಯಮಾವಳಿಗಳನ್ನು ಸಕ್ಷಮ ಪ್ರಾಧಿಕಾರವಾದ ಸಹಕಾರ ಸಂಘಗಳಲ್ಲಿ ನೋಂದಣಿ ಮಾಡಿಸಲು ಕ್ರಮವಹಿಸಲಾಗುವುದು.<br>ಬೋಧಕೇತರ ಹುದ್ದೆಗಳ ಸಂಬಂಧ ನಿರ್ದೇಶಕರು, ಡಿಎಂಇರವರು ಸಲ್ಲಿಸಿರುವ ವರದಿಯನ್ವಯ ಕರಡು ಸಿ & ಆರ್ ನ್ನು ಪ್ರಕಟಿಸಲು ಪರಿಶೀಲಿಸಲಾಗುತ್ತಿದೆ. |

| | | |
|---|---|---|
| (ಉ) | ಯಾವ ಕಾಲಮಿತಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗುವುದು? | ಬೈಲಾ, ಎಂ.ಓ.ಎ ಮತ್ತು ಬೋಧಕ ಹುದ್ದೆಗಳಿಗೆ ಸಂಬಂಧಿಸಿದಂತೆ ಸಿ & ಆರ್ ನಿಯಮಾವಳಿಗಳಿಗೆ ಈಗಾಗಲೇ ಆಡಳಿತ ಮಂಡಳಿಯ ಅನುಮೋದನೆ ಪಡೆಯಲಾಗಿದೆ. ಸದರಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆ ಮತ್ತು ಕಾನೂನು ಇಲಾಖೆಗಳ ಸಹಮತ ಬಂದ ಕೂಡಲೇ ಅನುಷ್ಠಾನಗೊಳಿಸಲಾಗುವುದು. |
| (ಊ) | ವೈದ್ಯಕೀಯ ಶಿಕ್ಷಣ ಇಲಾಖೆಯ ಖಾಯಂ ನೌಕರರಿಗೆ ಆರೋಗ್ಯ ಜ್ಯೋತಿ ಸಂಜೀವಿನಿ ಸ್ಕೀಮ್ (Cashless Treatment) ಅಳವಡಿಸಿಕೊಳ್ಳುವ ಬಗ್ಗೆ ವೈದ್ಯಕೀಯ ಶಿಕ್ಷಣ ನಿರ್ದೇಶಕರ ಆದ್ಯತೆಯ ಸಮಿತಿಯಿಂದ ವರದಿ ಪಡೆದುಕೊಳ್ಳಲಾಗಿದೆಯೇ; ವರದಿ ಪಡೆದುಕೊಂಡಿದ್ದರೆ ಅನುಷ್ಠಾನ ಮಾಡಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು) | ವೈದ್ಯಕೀಯ ಶಿಕ್ಷಣ ಇಲಾಖೆಯ ಖಾಯಂ ನೌಕರರಿಗೆ ಆರೋಗ್ಯ ಜ್ಯೋತಿ ಸಂಜೀವಿನಿ ಸ್ಕೀಮ್ (Cashless Trreatment) ಅಳವಡಿಸಿಕೊಳ್ಳುವ ಬಗ್ಗೆ ವೈದ್ಯಕೀಯ ಶಿಕ್ಷಣ ನಿರ್ದೇಶಕರ ಆದ್ಯತೆಯ ಸಮಿತಿಯಿಂದ ದಿನಾಂಕ:08.11.2021 ರಂದು ನಡೆದ ಸಭೆಯಲ್ಲಿ ಚರ್ಚಿಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.<br><br>ಸದರಿ ಸಭೆಯ ನಡವಳಿಯನುಸಾರ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನೀಡುತ್ತಿರುವ ನೂತನ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ" (KASS)ಯನ್ನು ರಾಜ್ಯದ' ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಎಲ್ಲಾ ಸ್ವಾಯತ್ತ ಸಂಸ್ಥೆಗಳ ಎಲ್ಲಾ ವೃಂದದ ನೌಕರರಿಗೆ ಹಾಗೂ ಅವರ ಅವಲಂಬಿತರಿಗೆ ಅನುಷ್ಠಾನಗೊಳಿಸುವ ಸಂಬಂಧವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು)ಯ ಈ ಕೆಳಕಂಡಂತೆ ಅಭಿಪ್ರಾಯವನ್ನು ನೀಡಿರುತ್ತದೆ.<br><br>"ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 16 ಎಸ್ಎಂಆರ್ 2020 (ಭಾಗ-5), ದಿನಾಂಕ: 09.03.2023ರಲ್ಲಿ ಈ ಯೋಜನೆಗೆ ಒಳಪಡದ ನೌಕರರ ವರ್ಗದಲ್ಲಿ ಸ್ವಾಯತ್ತ ಸಂಸ್ಥೆಗಳ ನೌಕರರು ಸಹ ಒಳಗೊಂಡಿರುತ್ತಾರೆ ಎಂಬುದನ್ನು ಸ್ಪಷ್ಟಪಡಿಸಲಾಗಿದೆ. ಮುಂದುವರೆದು, ದಿನಾಂಕ:28.03.2021ರ ಅಧಿಕೃತ ಜ್ಞಾಪನ:ಸಿಆಸುಇ 19 ಸೇಇವಿ 2021ರಲ್ಲಿ ರಾಜ್ಯ ಸರ್ಕಾರವು ಸ್ಥಾಪಿಸಿರುವ ನಿಗಮ, ಮಂಡಳಿ, ಕಂಪನಿ, ಸ್ಥಳೀಯ ಸಂಸ್ಥೆ, ವಿಶ್ವವಿದ್ಯಾಲಯ ಇತ್ಯಾದಿ ಸ್ವಾಯತ್ತ ಸಂಸ್ಥೆಗಳು ಅವುಗಳ ನೌಕರರ ನೇಮಕಾತಿ ಮತ್ತು ಸೇವಾಷರತ್ತುಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ನಿಯಮ/ ನಿಯಮಗಳನ್ನು ರಚಿಸುವ ಬಗ್ಗೆ ವಿವರವಾದ ಸೂಚನೆಗಳನ್ನು ನೀಡಲಾಗಿದೆ. ಈ ಅಂಶಗಳನ್ನು ಗಮನದಲ್ಲಿ ಇರಿಸಿಕೊಂಡು ಆಡಳಿತ ಇಲಾಖೆಯೇ ಸೂಕ್ತ ಕ್ರಮವಹಿಸಬಹುದಾಗಿದೆ" ಎಂದು ತಿಳಿಸಲಾಗಿದೆ.<br><br>ಈ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಎಂಇಡಿ623ಎಂಪಿಎಸ್ 2023

**(ಡಾ: ಶರಣಪ್ರಕಾಶ ಆರ್. ಪಾಟೀಲ್)**
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು